ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ ದಿನಾಂಕ : DATE : 28/05/2019

ಗುಲಾಂ ನಬಿ ಆಜಾದ್ ಭಾಗಿ

# ಸಂಪುಟ ಪುನರ್ ರಚನೆ: ಸಚಿವರ ಸಭೆ ಇಂದು

28-5-19

ಪ್ರಜಾವಾಣಿ ವಾರ್ತೆ

ಬೆಂಗಳೂರು: ಜೆಡಿಎಸ್- ಕಾಂಗ್ರೆಸ್ ಸಮ್ಮಿಶ್ರ ಸರ್ಕಾರಕ್ಕೆ ಎದುರಾಗಿರುವ ಸಂಕಷ್ಟ, ರಾಜ್ಯ ರಾಜಕೀಯದಲ್ಲಿ ನಡೆಯುತ್ತಿರುವ ವಿದ್ಯಮಾನಗಳ ಕುರಿತು ಚರ್ಚಿಸಲು ಕೆಪಿಸಿಸಿ ಕಚೇರಿಯಲ್ಲಿ ಮಂಗಳವಾರ (ಮೇ 28) ಕಾಂಗ್ರೆಸ್ ಸಚಿವರ ಸಭೆ ನಡೆಯಲಿದೆ.

ಪಕ್ಷದ ರಾಜ್ಯ ಉಸ್ತುವಾರಿ ಕೆ.ಸಿ.ವೇಣುಗೋಪಾಲ್, ಹಿರಿಯ ನಾಯಕ ಗುಲಾಂ ನಬಿ ಆಜಾದ್, ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಸಂಪುಟ ವಿಸ್ತರಣೆ ಮತ್ತು ಪುನರ್ ರಚನೆ ಕುರಿತಂತೆ ವೇಣುಗೋಪಾಲ್ ಅವರು ಸಚಿವರಿಂದ ಅಭಿಪ್ರಾಯ ಸಂಗ್ರಹಿಸಲಿದ್ದಾರೆ. ಸಂಪುಟದಿಂದ ಯಾರನ್ನು ಕೈ ಬಿಡಬೇಕು, ಯಾರಿಗೆ ಅವಕಾಶ ಕಲ್ಪಿಸಬೇಕು ಎಂಬ ಬಗ್ಗೆಯೂ ತೀರ್ಮಾನಕ್ಕೆ ಬರುವ ಸಾಧ್ಯತೆ ಇದೆ ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ.

**ಕಾಂಗ್ರೆಸ್ ನಾಯಕರ ಸಭೆ:** ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿರುವ ಮಧುಗಿರಿ ಮಾಜಿ ಶಾಸಕ, ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಕೆ.ಎನ್.ರಾಜಣ್ಣ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ತುಮಕೂರು ಜಿಲ್ಲೆಯ ಕಾಂಗ್ರೆಸ್ ನಾಯಕರು ಆಗ್ರಹಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿ ಜಿ.ಪರಮೇಶ್ವರ, ಸಚಿವ ಜಮೀರ್ ಅಹ್ಮದ್, ದಿನೇಶ್ ಗುಂಡೂರಾವ್, ಶಾಸಕ ಅಖಂಡ ಶ್ರೀನಿವಾಸಮೂರ್ತಿ ಕೆಪಿಸಿಸಿ ಕಚೇರಿಯಲ್ಲಿ ಸೋಮವಾರ ಚರ್ಚೆ ನಡೆಸಿದರು.

ಬೃಹತ್ ಬೆಂಗಳೂರು ನಗರಪಾಲಿಕೆಗೆ (ಬಿಬಿಎಂಪಿ) ಮುಂದಿನ ವರ್ಷ ಚುನಾವಣೆ ನಡೆಯಲಿದ್ದು, ಈ ಬಗ್ಗೆಯೂ ನಾಯಕರು ಚರ್ಚಿಸಿದ್ದಾರೆ.

11